# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:-** ಶ್ರೀ ಯಮನಪ್ಪ ರಾಮತಾಳ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕುದರಿಮೋತಿ ಗ್ರಾಮ ಪಂಚಾಯಿತಿ, ಯಲಬುರ್ಗ ತಾಲ್ಲೂಕು ಕೊಪ್ಪಳ ಜಿಲ್ಲೆ ರವರ ವಿರುದ್ಧ ಕರ್ನಾಟಕ ಲೋಕಾಯುಕ್ತ ವರದಿಯ ಹಿನ್ನೆಲೆಯಲ್ಲಿ ಅಂತಿಮ ದಂಡನಾ ಆದೇಶದ ಕುರಿತು.

**ಓದಲಾಗಿದೆ:-**
1) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ. ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ಜಿಎಲ್‌ಬಿ-8024/2015/ಎಆರ್‌ಇ-3 ದಿನಾಂಕ:28.11.2016
2) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 04 ಇಎನ್‌ಕ್ಯೂ 2017, ದಿ:13.01.2017
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ಪತ್ರ ಸಂಖ್ಯೆ/ ಉಪಲೋಕ್-1/ಡಿಇ/2017/ಎಆರ್‌ಇ-9, ದಿನಾಂಕ:05.02.2021,
4) ಮಾನ್ಯ ಉಪ ಲೋಕಾಯುಕ್ತರ ಶಿಫಾರಸ್ಸು ಉಪಲೋಕ್-1/ಡಿಇ/2017/ ಎಆರ್‌ಇ-9, ದಿನಾಂಕ:02.02.2021,
5) ಆಪಾದಿತ ನೌಕರರಿಗೆ ಜಾರಿಗೊಳಿಸಲಾದ ಸರ್ಕಾರದ 2ನೇ ಕಾರಣ ಕೇಳುವ ನೋಟೀಸು ಸಂಖ್ಯೆ: ಗ್ರಾಅಪ 75 ಗ್ರಾಪಂಕಾ 2021, ದಿನಾಂಕ:10.06.2021.
6) ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯಿತಿ, ಕೊಪ್ಪಳ ಜಿಲ್ಲೆ ಕೊಪ್ಪಳ ರವರ ಪತ್ರ ಸಂಖ್ಯೆ:ಜಿಪಂಕೊ/ಸಿಸಿಎ/ಲೋಕಾಯುಕ್ತ/ಸಿಆರ್-18/2021-22/1406, ದಿನಾಂಕ:19.08.2021

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮಾಂಕ(1)ರ ವರದಿಯಲ್ಲಿ ಕೊಪ್ಪಳ ಜಿಲ್ಲೆ, ಕುದುರಿಮೋತಿ ಗ್ರಾಮದಲ್ಲಿ ರಸ್ತೆ ಮತ್ತು ಚರಂಡಿ ಕಾಮಗಾರಿಯನ್ನು ಕಳಪೆಯಾಗಿ, ಅವೈಜ್ಞಾನಿಕವಾಗಿ ನಿರ್ವಹಿಸಿ, ಹಣ ದುರುಪಯೋಗಕ್ಕೆ ಕಾರಣರಾಗಿರುವ ಆರೋಪಗಳಿಗೆ ಸಂಬಂಧಿಸಿದಂತೆ ಮಾನ್ಯ ಉಪಲೋಕಾಯುಕ್ತರಿಂದ ದಿನಾಂಕ:16.11.2016 ರಂದು ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12(3) ರನ್ವಯ ಸ್ವೀಕೃತವಾಗಿದ್ದ ವರದಿಯನ್ನು ಪರಿಶೀಲಿಸಿ, ಮೇಲೆ ಓದಲಾದ ಕ್ರಮಾಂಕ (2)ರ ಆದೇಶ ಸಂಖ್ಯೆ: ಗ್ರಾಅಪ 04 ಇಎನ್‌ಕ್ಯೂ 2017, ದಿನಾಂಕ:13.01.2017 ರಲ್ಲಿ ಪ್ರಕರಣದ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತ-01 ರವರಿಗೆ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (3) ಮತ್ತು (4)ರಲ್ಲಿ ಮಾನ್ಯ ಉಪಲೋಕಾಯುಕ್ತರು ದಿನಾಂಕ:02.02.2021 ರಂದು ವಿಚಾರಣಾ ವರದಿಯೊಂದಿಗೆ ಸಲ್ಲಿಸಿರುವ ಶಿಫಾರಸ್ಸಿನಲ್ಲಿ ಆಪಾದಿತ ನೌಕರರಾದ ಶ್ರೀ ಯಮನಪ್ಪ ರಾಮತಾಳ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕುದುರಿಮೋತಿ ಗ್ರಾಮ ಪಂಚಾಯಿತಿ, ಯಲಬುರ್ಗಾ ತಾಲ್ಲೂಕು, ಕೊಪ್ಪಳ ಜಿಲ್ಲೆ ಇವರ ಮೇಲಿನ ಆರೋಪವು ರುಜುವಾತಾಗಿರುವುದರಿಂದ "ಇವರಿಗೆ ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಚಿತ ಪರಿಣಾಮವಾಗಿ ತಡೆಹಿಡಿಯುವ ದಂಡನೆ ವಿಧಿಸುವಂತೆ ಹಾಗೂ ಇವರಿಂದ ಉಂಟಾಗಿರುವ ಆರ್ಥಿಕ ನಷ್ಟ ರೂ.1,05,008/-ಗಳನ್ನು ಇವರ ವೇತನ ಮತ್ತು ಭತ್ಯೆಗಳಿಂದ ವಸೂಲು ಮಾಡಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ(5)ರಲ್ಲಿ ಆಪಾದಿತ ಸರ್ಕಾರಿ ನೌಕರ ಶ್ರೀ ಯಮನಪ್ಪ ರಾಮತಾಳ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕುದರಿಮೋತಿ ಗ್ರಾಮ ಪಂಚಾಯಿತಿ, ಯಲಬುರ್ಗ ತಾಲ್ಲೂಕು ಕೊಪ್ಪಳ ಜಿಲ್ಲೆ ಇವರಿಗೆ 2ನೇ ಕಾರಣ ಕೇಳುವ ನೋಟೀಸು ಜಾರಿಗೊಳಿಸಿ ಲಿಖಿತ ವಿವರಣೆಯನ್ನು ಸಲ್ಲಿಸುವಂತೆ ಸೂಚಿಸಲಾಗಿತ್ತು.

ಮೇಲೆ ಓದಲಾದ ಕ್ರಮಾಂಕ (6)ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕೊಪ್ಪಳ ಜಿಲ್ಲಾ ಪಂಚಾಯಿತಿ ಇವರು ಶ್ರೀ ಯಮನಪ್ಪ ರಾಮತಾಳ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕುದರಿಮೋತಿ ಗ್ರಾಮ ಪಂಚಾಯಿತಿ, ಯಲಬುರ್ಗ ತಾಲ್ಲೂಕು ಕೊಪ್ಪಳ ಜಿಲ್ಲೆ ಇವರು ಕೊವೀಡ್–19 ರ ಸಾಂಕ್ರಾಮಿಕ ರೋಗಕ್ಕೆ ದಿನಾಂಕ:12.05.2021 ರಂದು ತುತ್ತಾಗಿರುವುದಾಗಿ ಮರಣ ಪ್ರಮಾಣ ಪತ್ರದೊಂದಿಗೆ ವರದಿ ಮಾಡಿರುವುದರಿಂದ ಈ ಹಂತದಲ್ಲಿ ಮೃತ ಆಪಾದಿತ ಸರ್ಕಾರಿ ನೌಕರರಿಗೆ ವಾರ್ಷಿಕ ವೇತನ ಬಡ್ತಿ ತಡೆಹಿಡಿಯಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲವೆಂದು ಮತ್ತು ಮಾನ್ಯ ಉಪ ಲೋಕಾಯುಕ್ತರು ಶಿಫಾರಸ್ಸು ಮಾಡಿರುವ ದಂಡನೆಯಲ್ಲಿ ಇವರಿಂದ ಸರ್ಕಾರಕ್ಕೆ ಉಂಟಾಗಿರುವ ಆರ್ಥಿಕ ನಷ್ಟ ರೂ.1,05,008/–ಗಳನ್ನು ಮೃತ ಸರ್ಕಾರಿ ನೌಕರನಿಗೆ ಲಭ್ಯವಾಗಬಹುದಾದ ಡಿ.ಸಿ.ಆರ್.ಜಿ ಮೊತ್ತದಿಂದ ವಸೂಲು ಮಾಡುವ ದಂಡನೆ ವಿಧಿಸಲು ತೀರ್ಮಾನಿಸಿದೆ. ಅದರಂತೆ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 75 ಗ್ರಾಪಂಕಾ 2021, ಬೆಂಗಳೂರು, ದಿನಾಂಕ: 7ನೇ ಫೆಬ್ರವರಿ 2022.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಯಮನಪ್ಪ ರಾಮತಾಳ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕುದರಿಮೋತಿ ಗ್ರಾಮ ಪಂಚಾಯಿತಿ, ಯಲಬುರ್ಗ ತಾಲ್ಲೂಕು ಕೊಪ್ಪಳ ಜಿಲ್ಲೆ ಇವರ ವಿರುದ್ಧದ ಆರೋಪಗಳು ರುಜುವಾತಾಗಿರುವುದರಿಂದ **ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 8(iv) ರನ್ವಯ** ಇವರಿಂದ ಸರ್ಕಾರಕ್ಕೆ ಉಂಟಾಗಿರುವ ಆರ್ಥಿಕ ನಷ್ಟ ರೂ.1,05,008/–(ಒಂದು ಲಕ್ಷ ಐದು ಸಾವಿರ ಎಂಟು ರೂಪಾಯಿ) ಗಳನ್ನು ಮೃತ ಸರ್ಕಾರಿ ನೌಕರನಿಗೆ ಲಭ್ಯವಾಗಬಹುದಾದ ಡಿ.ಸಿ.ಆರ್.ಜಿ ಮೊತ್ತದಿಂದ ವಸೂಲು ಮಾಡುವ ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Chetna 7/2/22

(ಚೇತನ.ಎಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

7/2/22

ಇವರಿಗೆ:–

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ, ಬಹುಮಹಡಿ ಕಟ್ಟಡ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು
4) ಅಪರ ನಿಬಂಧಕರು(ವಿಚಾರಣೆಗಳು–9), ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
5) ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯಿತಿ, ಕೊಪ್ಪಳ ಜಿಲ್ಲೆ,
6) ಕಾರ್ಯನಿರ್ವಹಣಾಧಿಕಾರಿ, ತಾಲ್ಲೂಕು ಪಂಚಾಯಿತಿ ಯಲಬುರ್ಗಾ ತಾಲ್ಲೂಕು, ಕೊಪ್ಪಳ ಜಿಲ್ಲೆ.
7) ಶ್ರೀ ಯಮನಪ್ಪ ರಾಮತಾಳ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕುದರಿಮೋತಿ ಗ್ರಾಮ ಪಂಚಾಯಿತಿ, ಯಲಬುರ್ಗ ತಾಲ್ಲೂಕು ಕೊಪ್ಪಳ ಜಿಲ್ಲೆ **(ಇವರ ವಾರಸುದಾರರಿಗೆ ಕಾರ್ಯನಿರ್ವಹಣಾಧಿಕಾರಿ, ತಾಲ್ಲೂಕು ಪಂಚಾಯಿತಿ ಯಲಬುರ್ಗಾ ತಾಲ್ಲೂಕು, ಕೊಪ್ಪಳ ಜಿಲ್ಲೆ ಇವರ ಮುಖಾಂತರ)**
8) ನಿರ್ದೇಶಕರು (ಇ–ಆಡಳಿತ), ಇಲಾಖಾ ವೆಬ್–ಸೈಟಿನಲ್ಲಿ ಪ್ರಕಟಿಸಲು.
9) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.